# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತಾರನೆಯ ಅಧಿವೇಶನ

## <u>ಕಾರ್ಯಕಲಾಪಗಳ ಪಟ್ಟಿ</u>

**ಮಂಗಳವಾರ, ದಿನಾಂಕ:22ನೇ ಮಾರ್ಚ್, 2022**

**(ಸಮಯ: ಬೆಳಗ್ಗೆ: 10.30 ಗಂಟೆಗೆ)**

***

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಇಪ್ಪತ್ತೊಂದನೆಯ ಪಟ್ಟಿ

ಆ) **<u>ತಡೆಹಿಡಿಯಲಾದ ಪ್ರಶ್ನೆಗಳು:</u>**

| | |
|---|---|
| 11ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಪಿ.ಆರ್. ರಮೇಶ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 155 (1325) | ಮಾನ್ಯ ಸಹಕಾರ ಸಚಿವರು |
| 11ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಕೆ.ಎ. ತಿಪ್ಪೇಸ್ವಾಮಿ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 156 (1298) | ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು |
| 16ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಯು.ಬಿ.ವೆಂಕಟೇಶ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 226 (1892)<br><br>16ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಹೆಚ್.ಎಂ.ರಮೇಶ್‌ಗೌಡ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 237 (1837) | ಮಾನ್ಯ ನಗರಾಭಿವೃದ್ಧಿ ಸಚಿವರು |
| 19ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಸಲೀಂ ಅಹಮದ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 273 (2185) | ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು |

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಇಪ್ಪತ್ತೊಂದನೆಯ ಪಟ್ಟಿ

## 02. ಕಾರ್ಯದರ್ಶಿಯವರ ವರದಿ

146ನೇ ಅಧಿವೇಶನದ ದಿನಾಂಕ: 15.02.2022ರ ಉಪವೇಶನದಲ್ಲಿ ಕಾರ್ಯದರ್ಶಿಯವರ ವರದಿಯನ್ನು ಮಂಡಿಸಿದ ತರುವಾಯ ಘನತೆವೆತ್ತ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಕಾರ್ಯದರ್ಶಿಯವರು ಸಭೆಯಲ್ಲಿ ಮಂಡಿಸುವುದು.

## 03. ಇಲಾಖಾ ನೀತಿ ಹಾಗೂ ಕಾರ್ಯಚರಣೆ ಮೇಲಿನ ಚರ್ಚೆ

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ನೀತಿ ಹಾಗೂ ಕಾರ್ಯಚರಣೆಯ ಮೇಲಿನ ಚರ್ಚೆ

..2..

## 04. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಮುನಿರಾಜು ಗೌಡ ಪಿ.ಎಂ.** ಅವರು ಬೆಂಗಳೂರು ದಕ್ಷಿಣ ತಾಲ್ಲೂಕಿನ ಕೆಂಬತ್ತಳ್ಳಿ ಸರ್ವೆ ನಂ.85 ನೆಲ್ಲೂ ರೆಡ್ಡಿ ಕ್ವಾರಿ ಪ್ರದೇಶದಲ್ಲಿ ಅನಧಿಕೃತ ಜೈವಿಕ ತ್ಯಾಜ್ಯದ ವಿಲೇವಾರಿಯಿಂದ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಾಸಿಸುತ್ತಿರುವ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

02. **ಶ್ರೀ ಶಾಂತಾರಾಮ್ ಬುಡ್ನ** ಸಿದ್ದಿ ಅವರು ಅರಣ್ಯ ಹಕ್ಕು ಕಾಯ್ದೆಯ 2006ರ ಸೆಕ್ಷನ್ 3(ಎ)ರ ಅನ್ವಯ ಬುಡಕಟ್ಟು ಜನಾಂಗದವರಿಗೆ ಮೂಲಭೂತ ಸೌಲಭ್ಯ ಕಲ್ಪಿಸುವ ಕುರಿತು ಮಾನ್ಯ ಅರಣ್ಯ, ಆಹಾರ ಮತ್ತು ನಾಗರೀಕರ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರ ಗಮನ ಸೆಳೆಯುವುದು.

03. **ಶ್ರೀ ಕೆ. ಹರೀಶ್‌ಕುಮಾರ್** ಅವರು ಮಂಗಳೂರು ಮಹಾನಗರ ವ್ಯಾಪ್ತಿಯ ಕಾವೂರೂ ಗ್ರಾಮದ ಸರ್ವೆ ನಂ.133ರಲ್ಲಿ ನಿರ್ಮಿಸಿರುವ ಪ್ರಾರ್ಥನಾ ಮಂದಿರಗಳಿಗೆ ಅಕ್ರಮವಾಗಿ ಪ್ರವೇಶಿಸಿ ದೇವರ ಮೂರ್ತಿಗಳನ್ನು ಧ್ವಂಸಗೊಳಿಸಿರುವ ಕುರಿತು ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

04. **ಶ್ರೀ ಗೋವಿಂದರಾಜು** ಅವರು ಕೋಲಾರ ನಗರದಿಂದ ಅಂತರಗಂಗೆ ಬೆಟ್ಟದ ಬುಡದವರೆಗೂ ರಸ್ತೆಯನ್ನು ಅಭಿವೃದ್ಧಿಪಡಿಸಿ ಬೆಟ್ಟದ ಬುಡದಿಂದ ಕಾಶಿ ವಿಶ್ವೇಶ್ವರ (ಅಂತರಗಂಗೆ) ದೇವಸ್ಥಾನದವರೆಗೂ ರಸ್ತೆ ಸಂಪರ್ಕವನ್ನು ಕಲ್ಪಿಸುವ ಕುರಿತು ಮಾನ್ಯ ಪ್ರವಾಸೋದ್ಯಮ ಹಾಗೂ ಪರಿಸರ ಮತ್ತು ಜೀವಿ ಪರಿಸ್ಥಿತಿ ಸಚಿವರ ಗಮನ ಸೆಳೆಯುವುದು.

05. **ಶ್ರೀ ಮರಿತಿಬ್ಬೇಗೌಡ** ಅವರು ಮಂಡ್ಯ ವೈದ್ಯಕೀಯ ವಿಜ್ಞಾನ ಶಿಕ್ಷಣ ಸಂಸ್ಥೆಯಲ್ಲಿ ಅಸೋಸಿಯೇಟ್ ಪ್ರೊಫೆಸರ್‌ಗಳಿಗೆ ನಿವೃತ್ತಿ ವೇತನವನ್ನು ಮಂಜೂರು ಮಾಡುವ ಕುರಿತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

## 05. ನಿಯಮ 330ರ ಮೇರೆಗೆ

01. **ಶ್ರೀಯುತರುಗಳಾದ ಕೆ.ಟಿ. ಶ್ರೀಕಂಠೇಗೌಡ, ಡಾ. ವೈ.ಎ. ನಾರಾಯಣಸ್ವಾಮಿ, ಮಾನ್ಯ ಸರ್ಕಾರಿ ಮುಖ್ಯ ಸಚೇತಕರು, ಅರುಣ ಶಹಾಪುರ, ಎಸ್.ವ್ಹಿ. ಸಂಕನೂರ, ಎಸ್.ಎಲ್.ಭೋಜೇಗೌಡ ಹಾಗೂ ನಿರಾಣಿ ಹಣಮಂತ್ ರುದ್ರಪ್ಪ** ಅವರುಗಳು ಅನುದಾನಿತ ಸಂಸ್ಥೆಗಳ ಶಿಕ್ಷಕ ಹಾಗೂ ಸಿಬ್ಬಂದಿ ವರ್ಗದವರಿಗೆ ಸೇವೆಗೆ ಸೇರಿದ ದಿನಾಂಕದಿಂದಲೇ ಸೇವಾ ಸೌಲಭ್ಯಗಳನ್ನು ಒದಗಿಸುವ ಕುರಿತು ಪ್ರಸ್ತಾಪಿಸುವುದು.

02. **ಡಾ. ವೈ.ಎ. ನಾರಾಯಣಸ್ವಾಮಿ, ಮಾನ್ಯ ಸರ್ಕಾರಿ ಮುಖ್ಯ ಸಚೇತಕರು,** ಅವರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಸಂಬಂಧಿಸಿದಂತೆ ವಿವಿಧ ನ್ಯಾಯಾಲಯಗಳಲ್ಲಿ ನಡೆಸುತ್ತಿರುವ ದಾವೆಗಳಿಗೆ ವಕೀಲರನ್ನು ನೇಮಿಸುವ ಪ್ರಕ್ರಿಯೆ ಕುರಿತು ಪ್ರಸ್ತಾಪಿಸುವುದು.

03. **ಡಾ. ತೇಜಸ್ವಿನಿಗೌಡ** ಅವರು ಬೆಂಗಳೂರಿನ ಸೆಂಚುರಿ ಕ್ಲಬ್ಬನ್ನು ಪಾರ್ಕ್‌ಜೋನ್‌ನಿಂದ ಹೊರತುಪಡಿಸದಿರುವುದರಿಂದ ಕ್ಲಬ್‌ನ ಅಭಿವೃದ್ಧಿ, ಪುನಶ್ಚೇತನ ಹಾಗೂ ನವೀಕರಣಕ್ಕೆ ಅಡಚಣೆ ಉಂಟಾಗಿರುವುದರ ಕುರಿತು ಪ್ರಸ್ತಾಪಿಸುವುದು.

04. **ಶ್ರೀಯುತರುಗಳಾದ ಎನ್.ರವಿಕುಮಾರ್, ಯು.ಬಿ.ವೆಂಕಟೇಶ್, ದಿನೇಶ್ ಗೂಳಿಗೌಡ ಹಾಗೂ ಡಿ.ಎಸ್. ಅರುಣ್** ಅವರುಗಳು ಕರ್ನಾಟಕ ಪರೀಕ್ಷಾ ಪ್ರಾಧಿಕಾರದಲ್ಲಿ ನಡೆಯುತ್ತಿರುವ ಅಕ್ರಮಗಳ ಕುರಿತು ಪ್ರಸ್ತಾಪಿಸುವುದು.

05. **ಶ್ರೀ ಸಿ.ಎನ್. ಮಂಜೇಗೌಡ ಹಾಗೂ ಶ್ರೀ ಕೆ.ಟಿ.ಶ್ರೀಕಂಠೇಗೌಡ** ಅವರುಗಳು ಕರ್ನಾಟಕ ಪೊಲೀಸ್ ಇಲಾಖೆಯಲ್ಲಿ ಮರುನೇಮಕಾತಿಯಾಗಿರುವ ಮಾಜಿ ಸೈನಿಕ ಪೊಲೀಸ್ ಸಿಬ್ಬಂದಿಗಳ ವರ್ಗಾವಣೆಗೆ ಪೊಲೀಸ್ ಇಲಾಖೆಯಲ್ಲಿ ಹೊರಡಿಸಿರುವ ಆದೇಶದ ಕುರಿತು ಪ್ರಸ್ತಾಪಿಸುವುದು.

..3..

## 06. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಚರ್ಚೆ

| | | |
|---|---|---|
| 1. | ಶ್ರೀ ಕೆ. ಎ. ತಿಪ್ಪೇಸ್ವಾಮಿ,<br>ಶ್ರೀ ಕೆ.ಟಿ.ಶ್ರೀಕಂಠೇಗೌಡ ಮತ್ತು<br>ಶ್ರೀ ಎಸ್.ಎಲ್ ಭೋಜೇಗೌಡ ಅವರುಗಳು | ಬಿಎಂಆರ್‌ಸಿಎಲ್‌ಗೆ ಭೂಸ್ವಾಧೀನ ಪ್ರಕ್ರಿಯೆಯಲ್ಲಿರುವ ಜಮೀನುಗಳನ್ನು ನಂದಿ ಇನ್‌ಫ್ರಾಸ್ಟ್ರಕ್ಚರ್ ಕಾರಿಡಾರ್ ಎಂಟರ್‌ಪ್ರೈಸಸ್ ಸಂಸ್ಥೆಗೆ ಸೇರಿದ ಭೂಮಿಯನ್ನು ಕೆ.ಐ.ಎ.ಡಿ.ಬಿ. ವತಿಯಿಂದ ಪಡೆದಿರುವ ಕುರಿತು. |
| 2. | ಶ್ರೀ ಬಿ.ಕೆ. ಹರಿಪ್ರಸಾದ್, ಮಾನ್ಯ ವಿರೋಧ ಪಕ್ಷದ ನಾಯಕರು, ಶ್ರೀ ಪ್ರಕಾಶ್ ಕೆ. ರಾಥೋಡ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು, ಶ್ರೀ ಅಲ್ಲಂ ವೀರಭದ್ರಪ್ಪ, ಶ್ರೀ ಆರ್.ಬಿ.ತಿಮ್ಮಾಪೂರ, ಶ್ರೀ ಸಲೀಂ ಅಹಮದ್, ಶ್ರೀ ಎಸ್.ರವಿ, ಶ್ರೀ ಯು.ಬಿ. ವೆಂಕಟೇಶ್ ಹಾಗೂ ಶ್ರೀಮತಿ ವೀಣಾ ಅಚ್ಚಯ್ಯ ಅವರುಗಳು | ರಾಜ್ಯದ ಕಾನೂನು ಹಾಗೂ ಸಮಾಜ ರಕ್ಷಕರಾಗಿರುವ ಕೆಲವು ಪೊಲೀಸರು ಹಣ ಸಂಪಾದನೆಗಾಗಿ ಭ್ರಷ್ಟಾಚಾರದಲ್ಲಿ ತೊಡಗಿರುವ ಕುರಿತು. |

## 07. ಅರ್ಧ ಗಂಟೆ ಕಾಲಾವಧಿ ಚರ್ಚೆ

೦1. "ರಾಜ್ಯದಲ್ಲಿರುವ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಅಗ್ನಿ ಸುರಕ್ಷತೆ" ಕುರಿತು ದಿನಾಂಕ:07.03.2022ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:139 (1176)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಕೆ. ಹರೀಶ್ ಕುಮಾರ್** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

೦2. ಕೋಲಾರ ಜಿಲ್ಲೆಯ ಕೆ.ಜಿ.ಎಫ್.ನಲ್ಲಿರುವ ಬೆಮಲ್ ಕಾರ್ಖಾನೆಯನ್ನು ಖಾಸಗೀಕರಣಗೊಳಿಸುತ್ತಿರುವ ಕುರಿತು ದಿನಾಂಕ:08.03.2022ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:159(1313)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಗೋವಿಂದರಾಜು** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

೦3. ಬೆಂಗಳೂರು ನಗರದ ಗುರು ರಾಘವೇಂದ್ರ ಸಹಕಾರ ಬ್ಯಾಂಕ್ ಮತ್ತು ವಶಿಷ್ಠ ಸೌಹಾರ್ದ ಸಹಕಾರ ಬ್ಯಾಂಕ್‌ನ ಅವ್ಯವಹಾರ ಕುರಿತು ದಿನಾಂಕ:15.02.2022ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:10 (13)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಯು.ಬಿ. ವೆಂಕಟೇಶ್** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**